OCTOBER 12, 2025

AKASHAVANI - DHARWAD

PRADESH SAAMACHARA (KANNADA) 07.05 A.M

<><><>

ಮುಖ್ಯಾಂಶಗಳು

- ಅರಣ್ಯ ಭಾಗದ ರೈತರಿಗೆ ಒಕ್ಕಲೆಬ್ಬಿಸದಂತೆ  ಸಚಿವ ಎಸ್.ಮಧು ಬಂಗಾರಪ್ಪ ಅಧಿಕಾರಿಗಳಿಗೆ ಸೂಚನೆ.
- ಅನ್ನಭಾಗ್ಯ ಯೋಜನೆಯಲ್ಲಿ ಅಕ್ಕಿಯ ಜತೆ ಬೇಳೆ, ಎಣ್ಣೆ, ಸಕ್ಕರೆ ಸೇರಿದಂತೆ ಕೆಲವು ಸಾಮಾಗ್ರಿ ವಿತರಿಸಲು ರಾಜ್ಯ ಸರ್ಕಾರ ಚಿಂತನೆ.
- ಸ್ವದೇಶಿ ವಸ್ತುಗಳನ್ನು ಬಳಸಿ ಆತ್ಮನಿರ್ಭರ, ನಶೆ ಮುಕ್ತ ಭಾರತ ನಿರ್ಮಿಸಲು ಸಂಕಲ್ಪ ಕೈಗೊಳ್ಳುವಂತೆ ಸಂಸದ ಬಸವರಾಜ ಬೊಮ್ಮಾಯಿ ಕರೆ.
- ಬನವಾಸಿ ಮತ್ತು ಮಿರ್ಜಾನ್ ಕೋಟೆಯಲ್ಲಿ ಧ್ವನಿ ಬೆಳಕು ಕಾರ್ಯಕ್ರಮ ಆಯೋಜಿಸುವ ಕುರಿತ ಪ್ರಸ್ತಾವ, ಕೇಂದ್ರಕ್ಕೆ ಸಲ್ಲಿಸುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಅಧಿಕಾರಿಗಳಿಗೆ  ನಿರ್ದೇಶನ.

ಈಗ ವಾರ್ತೆಗಳ ವಿವರ

ಬಹು ದಿನಗಳಿಂದ ಸಾಗುವಳಿ ಮಾಡಿಕೊಂಡು ಬರುತ್ತಿರುವ ಅರಣ್ಯ ಭಾಗದ ರೈತರಿಗೆ ತೊಂದರೆ ನೀಡಿ ಒಕ್ಕಲೆಬ್ಬಿಸಬಾರದು ಎಂದು ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಮಧು ಬಂಗಾರಪ್ಪ ಅರಣ್ಯ ಇಲಾಖಾ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಶಿವಮೊಗ್ಗ ಜಿಲ್ಲಾಡಳಿತ ಕಚೇರಿಯಲ್ಲಿ ಆಯೋಜಿಸಲಾಗಿದ್ದ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅನಾದಿ ಕಾಲದಿಂದ ಅರಣ್ಯ ಭೂಮಿಯಲ್ಲಿ ಸಾಗುವಳಿ ಮಾಡುತ್ತಿರುವ ರೈತರಿಗೆ ನೋಟಿಸ್ ನೀಡುವುದು, ತೊಂದರೆ ಕೊಟ್ಟು ಒಕ್ಕಲೆಬ್ಬಿಸುವ ಕೆಲಸವನ್ನು ಅರಣ್ಯ ಇಲಾಖೆ ಮಾಡಬಾರದು. ಹಾಗೂ ರೈತರ ಪರವಾಗಿ ಸುಪ್ರೀಂಕೋರ್ಟ್ ನೀಡಿರುವ ತೀರ್ಪುಗಳನ್ವಯ ನಡೆದುಕೊಳ್ಳಬೇಕು. ಹೊಸದಾಗಿ ಒತ್ತುವರಿಗೆ ಅವಕಾಶ ಮಾಡಬಾರದು. 1978 ಏಪ್ರೀಲ್ 27 ರ ಪೂರ್ವದ ಅರಣ್ಯ ಒತ್ತುವರಿವನ್ನು ಸಕ್ರಮಗೊಳಿಸಲು ಕ್ರಮ ಕೈಗೊಳ್ಳಬೇಕು. ಜಿಲ್ಲೆಯ ಎಲ್ಲ ಮುಖ್ಯ ರಸ್ತೆಗಳನ್ನು ನವೆಂಬರ್ ಮತ್ತು ಇತರೆ  ರಸ್ತೆಗಳ ಕಾಮಗಾರಿ ಡಿಸೆಂಬರ್ ಅಂತ್ಯದೊಳಗೆ ಪೂರ್ಣಗೊಳಿಸಬೇಕು. ಮಳೆ ಮುಗಿದ ತಕ್ಷಣ ರಸ್ತೆಗಳಲ್ಲಿನ ಗುಂಡಿಗಳನ್ನು ಮುಚ್ಚಬೇಕು. ಗುಂಡಿಗಳನ್ನು ಮುಚ್ಚುವ ಕಾಮಗಾರಿ ಗುಣಮಟ್ಟದಿಂದ ಕೂಡಿರಬೇಕು. ಜಿಲ್ಲಾ ಪೊಲೀಸ್ ವರಿ  ಷ್ಠಾಧಿಕಾರಿಗಳು ರಸ್ತೆ ಸುರಕ್ಷತಾ ನಿಯಮಗಳ ಬಗ್ಗೆ ಅರಿವು ಮೂಡಿಸಬೇಕು. ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳನ್ನು ನಿಗದಿತ ವೇಳೆಯೊಳಗೆ ಗುಣಮಟ್ಟದೊಂದಿಗೆ ಪೂರ್ಣಗೊಳಿಸಬೇಕು ಎಂದರು.

<><><>

ರಾಜ್ಯದ ಆಯ್ದ ಪ್ರದೇಶಗಳಲ್ಲಿ ಇಂದಿರಾ ಕ್ಯಾಂಟೀನ್‌ಗಳು ಕಾರ್ಯ ನಿರ್ವಹಿಸುತ್ತಿವೆ.  ಅಗತ್ಯವಿದ್ದ ಕಡೆಗಳಲ್ಲಿ ಕ್ಯಾಂಟೀನ್ ಆರಂಭಿಸುವ ಕಾರ್ಯ ಮುಂದುವರಿದಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿಯಲ್ಲಿ ಇಂದಿರಾ ಕ್ಯಾಂಟೀನ್ ಉದ್ಘಾಟಿಸಿ ನಂತರ ಮಾತನಾಡಿದ ಅವರು, ಬಡ ಮತ್ತು ಮಧ್ಯಮ ವರ್ಗದ ಜನರಿಗೆ ಅಗತ್ಯವಿರುವ ಯೋಜನೆಗಳನ್ನು ರೂಪಿಸಿ, ಅವುಗಳನ್ನು ಪ್ರತಿಯೊಬ್ಬರಿಗೆ ತಲುಪಿಸುವ ಧ್ಯೇಯವನ್ನು ಸರ್ಕಾರ

ಹೊಂದಿದೆ. ಅನ್ನಭಾಗ್ಯ ಯೋಜನೆಯಲ್ಲಿ ಐದು ಕೆಜಿ ಅಕ್ಕಿಯ ಜತೆ ಕುಟುಂಬ ಸದಸ್ಯರ ಸಂಖ್ಯೆ ಆಧಾರದಲ್ಲಿ ಮುಂದಿನ ಎರಡು ತಿಂಗಳಲ್ಲಿ ಬೇಳೆ, ಎಣ್ಣೆ, ಸಕ್ಕರೆ ಹಾಗೂ ಇತರ ಕೆಲವು ಸಾಮಾಗ್ರಿ ವಿತರಿಸಲು ಯೋಜನೆ ರೂಪಿಸಲಾಗಿದೆ ಎಂದರು.

<><><>

ಸ್ವದೇಶಿ ವಸ್ತುಗಳನ್ನು ಬಳಸಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭವ್ಯ ಭಾರತ, ಆತ್ಮನಿರ್ಭರ, ನಶೆ ಮುಕ್ತ ಭಾರತ ನಿರ್ಮಿಸಲು ಸಂಕಲ್ಪ ಕೈಗೊಳ್ಳುವಂತೆ ಸಂಸದ ಬಸವರಾಜ ಬೊಮ್ಮಾಯಿ ಕರೆ ನೀಡಿದ್ದಾರೆ. ಹಾವೇರಿಯಲ್ಲಿ, ನಶೆ ಮುಕ್ತ ಭಾರತದ ಸಂಕಲ್ಪದೊಂದಿಗೆ ಆತ್ಮ ನಿರ್ಭರ ಭಾರತಕ್ಕಾಗಿ ಹಾವೇರಿ ನಮೋ ಯುವ ಓಟ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ವಿದೇಶಿ ವಸ್ತುಗಳ ಮೇಲಿನ ಅವಲಂಬನೆ ಕಡಿಮೆ ಮಾಡಬೇಕು. ಭಾರತೀಯರಿಂದ ಭಾರತೀಯರಿಗೋಸ್ಕರ ಉತ್ಪಾದನೆಯಾದ ವಸ್ತುಗಳನ್ನು ಬಳಸಬೇಕು. ವಿದೇಶಿ ವ್ಯಾಮೋಹ ಕಡಿಮೆ ಮಾಡಬೇಕು ಎಂದರು.

<><><>

ಕೃಷಿ ಕ್ಷೇತ್ರಕ್ಕೆ ಹೆಚ್ಚಿನ ಉತ್ತೇಜನ ನೀಡುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು 2 ಸಾವಿರದ 100 ಕ್ಕೂ ಅಧಿಕ ಯೋಜನೆಗಳನ್ನು ಜಾರಿಗೆ ತಂದಿದ್ದು, 42 ಸಾವಿರ ಕೋಟಿ ರೂಪಾಯಿ ಹಣ ಬಿಡುಗಡೆ ಮಾಡಿದೆ. ದೇಶದ ಬೆನ್ನೆಲುಬಾದ ರೈತರಿಗೆಂದೇ ಆಯೋಜಿಸಲಾಗುವ ಕೃಷಿ ಮೇಳಗಳು ಆರ್ಥಿಕತೆಗೆ ಚೈತನ್ಯ ತುಂಬುತ್ತವೆ ಎಂದು ಸಂಸದ ಕೋಟ ಶ್ರೀನಿವಾಸ್ ಪೂಜಾರಿ ಹೇಳಿದ್ದಾರೆ. ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾನಿಲಯ ಶಿವಮೊಗ್ಗ, ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಬ್ರಹ್ಮಾವರದ ವಲಯ ಕೃಷಿ ಮತ್ತು ತೋಟಗಾರಿಕಾ ಸಂಶೋಧನಾ ಕೇಂದ್ರದ ಆವರಣದಲ್ಲಿ ಆಯೋಜಿಸಲಾದ ಎರಡು ದಿನಗಳ ಕೃಷಿ ಮೇಳ ಉದ್ಘಾಟಿಸಿ ಅವರು  ಮಾತನಾಡಿದರು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸಮನ್ವಯದಿಂದ ಕಾರ್ಯ ನಿರ್ವಹಿಸಿದಲ್ಲಿ ಕೃಷಿ ಕ್ಷೇತ್ರದಲ್ಲಿ ಹೆಚ್ಚಿನ ಪ್ರಗತಿ ಸಾಧಿಸಲು ಸಾಧ್ಯವಾಗುತ್ತದೆ. ಭತ್ತದ ಬೆಂಬಲ ಬೆಲೆ ಮತ್ತು ಕಾಳು ಮೆಣಸಿನ ಬೆಳೆಗಳ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜಂಟಿಯಾಗಿ ಕಾರ್ಯ ಯೋಜನೆಯನ್ನು ರೂಪಿಸಿದಾಗ ರೈತರಿಗೆ ನೆರವಾಗುತ್ತದೆ ಎಂದರು.

<><><>

ಪ್ರವಾಸೋದ್ಯಮವನ್ನು ಆಕರ್ಷಿಸುವ ನಿಟ್ಟಿನಲ್ಲಿ ಐತಿಹಾಸಿಕ ಸ್ಥಳಗಳಾದ ಬನವಾಸಿ ಮತ್ತು ಮಿರ್ಜಾನ್ ಕೋಟೆಯಲ್ಲಿ ಧ್ವನಿ ಬೆಳಕು ಕಾರ್ಯಕ್ರಮ ಆಯೋಜಿಸುವ ಕುರಿತ ಪ್ರಸ್ತಾವ ಸಿದ್ಧಪಡಿಸಿ, ಪ್ರಾಚ್ಯ ವಸ್ತು ಇಲಾಖೆಯ ಮೂಲಕ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿ, ಕಾರ್ಯಕ್ರಮ ಆಯೋಜನೆಗೆ ಕ್ರಮ ಕೈಗೊಳ್ಳುವಂತೆ ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳಿಗೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮೀ ಪ್ರಿಯ ಸೂಚಿಸಿದ್ದಾರೆ. ಕಾರವಾರದಲ್ಲಿ ನಡೆದ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರವಾಸಿ ಸ್ಥಳಗಳಲ್ಲಿ ಅಗತ್ಯ ಮೂಲ ಸೌಕರ್ಯಗಳನ್ನು ಒದಗಿಸಲು ಮತ್ತು ಬೀಚ್‌ಗಳಲ್ಲಿ ಸುರಕ್ಷತೆಯನ್ನು ಬಲಪಡಿಸಲು ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು. ಮುರುಡೇಶ್ವರ ಕಡಲತೀರದಲ್ಲಿ ಪ್ರವಾಸಿಗರಿಗೆ ಲಗೇಜ್ ಮತ್ತು ಲಾಕರ್ ವ್ಯವಸ್ಥೆ ಕಲ್ಪಿಸುವುದು, ಸ್ನಾನಗೃಹಗಳ ನಿರ್ಮಾಣ, ಹೆಚ್ಚುವರಿ ಲೈಫ್ ಗಾರ್ಡಗಳ  ನೇಮಕ, ತುರ್ತು ಸಂದರ್ಭದಲ್ಲಿ ನೆರವಾಗುವಂತೆ ಪ್ರಥಮ ಚಿಕಿತ್ಸಾ ಕೇಂದ್ರ ಮತ್ತು ನುರಿತ ಸಿಬ್ಬಂದಿಯನ್ನು ನಿಯೋಜಿಸುವಂತೆ ಸೂಚಿಸಿದರು. ನಿಯಮಬದ್ಧವಾಗಿರುವ ಮತ್ತು ಸೂಕ್ತ ದಾಖಲೆಗಳನ್ನು ಸಲ್ಲಿಸಿರುವ ಅರ್ಜಿಗಳನ್ನು ವಿಲೇವಾರಿ ಮಾಡಿ ಬೋಟಿಂಗ್ ನದೇಸಲಿ ಅನುಮತಿ ನೀಡಬೇಕು. ಕಾರವಾರದ ಕಡಲತೀರದಲ್ಲಿರುವ ಯುದ್ಧ ನೌಕೆ ಮತ್ತು ಯುದ್ಧ ವಿಮಾನದ ಮಾಹಿತಿಯನ್ನು ಒಳಗೊಂಡ ಕ್ಯೂರ್ ಆರ್ ಕೋಡ್ ರಚಿಸಿ, ಸಾಮಾಜಿಕ ಮಾಧ್ಯಮಗಳ ಮೂಲಕ ಹೆಚ್ಚಿನ ಪ್ರಚಾರ ಒದಗಿಸಲು ಕ್ರಮ ಕೈಗೊಳ್ಳುವಂತೆ ತಿಳಿಸಿದರು.

<><><>

ಈಗ ವಾಣಿಜ್ಯ ಪ್ರಕಟಣೆ

ನಂತರ ಪ್ರದೇಶ ಸಮಾಚಾರ ಮುಂದುವರೆಯುವುದು..

( 30 ಸೆಕೆಂದುಗಳು)

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಅಖಿಲ ಭಾರತೀಯ ಸಾಹಿತ್ಯ ಪರಿ ತ್ ಕರ್ನಾಟಕ ಕೊಡಮಾಡುವ 2025 ನೇ ಸಾಲಿನ, ಆದಿಕವಿ ಪ್ರಶಸ್ತಿಗೆ ತಿಪಟೂರು ಮೂಲದ, ಪ್ರಸ್ತುತ ಬೆಂಗಳೂರಿನಲ್ಲಿ ವಾಸವಾಗಿರುವ ಲೇಖಕಿ, ಸಾಹಿತಿ ಎಲ್.ವಿ.ಶಾಂತಕುಮಾರಿ ಹಾಗೂ ವಾಗ್ದೇವಿ ಪುರಸ್ಕಾರಕ್ಕೆ ಲೇಖಕ ದಾವಣಗೆರೆಯ ಅರಬಗಟ್ಟೆ ಅಣ್ಣಪ್ಪ ಭಾಜನರಾಗಿದ್ದಾರೆ. ಪ್ರಶಸ್ತಿಯು 1 ಲಕ್ಷ ರೂಪಾಯಿ ನಗದು ಹಾಗೂ ಸ್ಮರಣಿಕೆ ಒಳಗೊಂಡಿದೆ. ಇಂದು ಸಂಜೆ ಬೆಂಗಳೂರಿನ ಬಾಪೂ ಸಭಾಂಗಣದಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ಜರುಗಲಿದೆ. ಪ್ರದೇಶ ಸಮಾಚಾರಕ್ಕಾಗಿ ಎಲ್. ವಿ ಶಾಂತಕುಮಾರಿ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

ಕೇಂದ್ರ ಯುವಜನ ಮತ್ತು ಕ್ರೀಡಾ ಇಲಾಖೆ ವತಿಯಿಂದ ಆಯೋಜಿತ ಫಿಟ್ ಇಂಡಿಯಾ ಸ್ವಚ್ಛತಾ ಫ್ರೀಡಂ ರನ್ 6.0 ಭಾಗವಾಗಿ, ಈ ತಿಂಗಳ ನಾಲ್ಕು ಭಾನುವಾರಗಳಂದು ಸಂಡೇಸ್ ಆನ್ ಬೈಸಿಕಲ್ ಅಭಿಯಾನ ಆಯೋಜಿತವಾಗಿದೆ. ಇಂದು ರಾಜ್ಯದ ವಿವಿಧ ನಗರಗಳಲ್ಲಿ ಹಾಗೂ ಐತಿಹಾಸಿಕ ತಾಣಗಳಲ್ಲಿ ಆಯೋಜಿತ ಸಂಡೇಸ್ ಅನ್ ಬೈಸಿಕಲ್ ಅಭಿಯಾನದಲ್ಲಿ ವೈದ್ಯರು ಹಾಗೂ ಆರೋಗ್ಯ ಕ್ಷೇತ್ರದ ಪರಿಣತರು ಪಾಲ್ಗೊಳ್ಳಲಿದ್ದಾರೆ.

<><><>

ಹಣ್ಣು, ಹಸಿರು ತರಕಾರಿ ಸೇವಿಸುವ ಮೂಲಕ ನಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ಕ್ಯಾನ್ಸರ್ ರೋಗ ತಜ ಡಾಕ್ಟರ್ ವಿಜಯಲಕ್ಷ್ಮೀ ದೇಶಮಾನೆ ಹೇಳಿದ್ದಾರೆ. ಹುಬ್ಬಳ್ಳಿಯ ಕ್ಯಾನ್ಸರ್ ಆಸ್ಪತ್ರೆಯ ಆವರಣದಲ್ಲಿರುವ ಮಜೇಥಿಯಾ ಫೌಂಡೇಶನ್ನಿನ ರುಮಿಲಾ ಪ್ರಶಾಂತಿ ಮಂದಿರದಲ್ಲಿ ವಿಶ್ವ ಹಾಸ್ಪೈಸ್‌ಪ್ಯಾಲಿಯೇಟಿವ ಕೇರ್ ದಿನದ ಅಂಗವಾಗಿ ಆಯೋಜಿಸಲಾದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮಾನವೀಯ ಮೌಲ್ಯಗಳ್ಲು ಮರೆಯಾಗುತ್ತಿರುವ ಇಂದಿನ ದಿನಮಾನಗಳಲ್ಲಿ ಬಡವರ, ಕ್ಯಾನ್ಸರ್ ರೋಗದ ಚಿಕಿತ್ಸೆಯ ನಂತರದ ಆರೈಕೆಗೆ ನಿರಂತರವಾಗಿ ಸೇವೆ ಸಲ್ಲಿಸುತ್ತಿರುವ ಮಜೇಥಿಯಾ ಫೌಂಡೆಶನ್ನಿನ ಕಾರ್ಯ ಶ್ಲಾಘನೀಯ ಎಂದರು. ಕ್ಯಾನ್ಸರ್ ರೋಗ ತಜ ಡಾಕ್ಟರ್ ಬಿ.ಆರ್.ಪಾಟೀಲ ಮಾತನಾಡಿ, ಆಸ್ಪತ್ರೆಯ ಚಿಕಿತ್ಸೆಯ ಎಲ್ಲ ಹಂತಗಳು ಮುಗಿದ ನಂತರ ರೋಗಿಯ ಜೀವನದ ಕೊನೆಯ ದಿನಗಳಲ್ಲಿ  ಗೌರವಯುತ ಬದುಕು ನೀಡುವುದು  ಹಾಸ್ಪೈಸನ ಉದ್ದೇಶವಾಗಿದೆ ಎಂದರು.ಮಜೇಥಿಯಾ ಫೌಂಡೇಶನ್ ಚೇರಮನ್ ಜಿತೇಂದ್ರ ಮಜೇಥಿಯಾ ಮಾತನಾಡಿ, ತಮ್ಮ ಕರ್ಮಭೂಮಿಯಾಗಿರುವ ಹುಬ್ಬಳ್ಳಿಯಲ್ಲಿ ಸಾಮಾಜಿಕ ಕಾರ್ಯಮಾಡುವ ನಿಟ್ಟಿನಲ್ಲಿ  ಕ್ಯಾನ್ಸರ ಚಿಕಿತ್ಸೆಯ ನಂತರದ ಆರೈಕೆಗೆ ಬಡ ಕುಟುಂಬಗಳಿಗೆ ಅನುಕೂಲ ಕಲ್ಪಿಸಲಾಗಿದೆ ಎಂದರು. ಹಾಸ್ಪೈಸ್ ವೈದ್ಯಾಧಿಕಾರಿ ಡಾಕ್ಟರ್ ನಾಗರಾಜ ಸಾನು ಮಾತನಾಡಿ, ರೋಗಿಯನ್ನು ಮಾನಸಿಕವಾಗಿ ಸಧೃಡಗೊಳಿಸುವ ಮೂಲಕ ನೆಮ್ಮದಿಯ ಜೀವನ ಸಾಗಿಸಲು ಹಾಸ್ಪೈಸ ಸಹಕಾರಿಯಾಗಿದೆ ಎಂದು ಹೇಳಿದರು. ಫೌಂಡೇಶನ್ ಅಧ್ಯಕ್ಷೆ ನಂದಿನಿ ಕಶ್ಯಪ್ ಮಜೇಥಿಯಾ ಮಾತನಾಡಿ, ಬಡವರು, ಆರ್ಥಿಕವಾಗಿ ಹಿನ್ನೆಡೆಯುಳ್ಳವರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಮನವಿ ಮಾಡಿದರು.

<><><>